### 9. ವಲಸೆ ಕಾರ್ಮಿಕರ ಕುರಿತ ಅರ್ಜಿ ವಿಚಾರಣೆ – ಪ್ರಶಾಂತ್ ವಿರುದ್ಧ ಕಿಡಿಕಾರಿದ ಸುಪ್ರೀಂಕೋರ್ಟ್

ನ್ಯಾಯಾಂಗ ಸರ್ಕಾರದ ಒತ್ತೆಯಾಳು ಅಲ್ಲ ಎಂದು ಸುಪ್ರೀಂಕೋರ್ಟ್ ಕಿಡಿಕಾರಿದೆ. ದೇಶದಾದ್ಯಂತ ಸಿಲುಕಿರುವ ವಲಸೆ ಕಾರ್ಮಿಕರಿಗೆ ಕೊರೊನಾ ವೈರಸ್ ಪರೀಕ್ಷೆಯ ಬಳಿಕ ಸ್ವಗ್ರಾಮಗಳಿಗೆ ಹಿಂತಿರುಗಲು ಅನುಮತಿ ನೀಡಬೇಕು. ಈ ಕುರಿತು ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡಬೇಕೆಂದು ಕೋರಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ಸಂದರ್ಭದಲ್ಲಿ ಸುಪ್ರೀಂಕೋರ್ಟ್ ತಿಳಿಸಿತು.

ಲಾಕ್‌ಡೌನ್ ಸಂದರ್ಭದಲ್ಲಿ ಕೇಂದ್ರ ಸರ್ಕಾರವು ವಲಸೆ ಕಾರ್ಮಿಕರ ಬಗ್ಗೆ ಕಣ್ಣುಮುಚ್ಚಿ ಕುಳಿತಿದೆ. ಶೇ.90ರಷ್ಟು ಕಾರ್ಮಿಕರಿಗೆ ವೇತನವಾಗಲೀ, ಪಡಿತರವಾಗಲೀ ದೊರಕಿಲ್ಲ. ಹತಾಶ ಸ್ಥಿತಿಯಲ್ಲಿರುವ ಕಾರ್ಮಿಕರಿಗೆ ತಮ್ಮ ಮನೆಗಳಿಗೆ ಹಿಂತಿರುಗಲು ಅನುಮತಿ ನೀಡಬೇಕೆಂದು ಅರ್ಜಿದಾರರ ಪರ ವಕೀಲ ಪ್ರಶಾಂತ್ ಭೂಷಣ್ ಕೋರಿದರು. ಕೇಂದ್ರ ಸರ್ಕಾರದ ಪರ ಹಾಜರಿದ್ದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ಸರ್ಕಾರವು ವಲಸೆ ಕಾರ್ಮಿಕರ ಪರ ಕಾಳಜಿ ಹೊಂದಿದ್ದು, ಅವರಿಗೆ ಅಗತ್ಯ ಸಹಾಯವನ್ನು ಮಾಡಲು ಯತ್ನಿಸುತ್ತಿದೆ. ಈ ನಿಟ್ಟಿನಲ್ಲಿ ಆಯಾ ರಾಜ್ಯಗಳೊಂದಿಗೆ ಸಮಾಲೋಚಿಸುತ್ತಿದೆ. ಪ್ರಶಾಂತ್ ಅವರು ತಮ್ಮ ಅರ್ಜಿದಾರರು ನೀಡಿದ ಮಾಹಿತಿ ಆಧಾರದ ಮೇಲೆ ತಪ್ಪಾದ ವರದಿಗಳನ್ನು ನೀಡುತ್ತಿದ್ದಾರೆ ಎಂದು ದೂರಿದರು.

ಈ ಅರ್ಜಿಗೆ ಸಂಬಂಧಿಸಿದಂತೆ ನ್ಯಾಯಾಲಯವು ಸರ್ಕಾರಕ್ಕೆ ಯಾವುದೇ ನೋಟಿಸ್ ಅಥವಾ ನಿರ್ದೇಶನ ನೀಡಬಾರದು ಎಂದು ಮೆಹ್ತಾ ಅವರು ಮನವಿ ಮಾಡಿದರು. ಇದು ತಪ್ಪು ಸಂದೇಶಕ್ಕೆ ಎಡೆ ಮಾಡಿಕೊಡುತ್ತದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಎರಡು ವಾರದೊಳಗೆ ಉತ್ತರಿಸುವುದಾಗಿ ಹೇಳಿದರು. ಇದಕ್ಕೆ ಪ್ರತಿಕ್ರಿಯಿಸಿದ ನ್ಯಾಯಮೂರ್ತಿಗಳಾದ ಎನ್.ವಿ.ರಮಣ, ಸಂಜಯ್ ಕಿಶನ್ ಕೌಲ್ ಮತ್ತು ಬಿ.ಆರ್. ಗವಾಯಿ ಅವರನ್ನೊಳಗೊಂಡ ಪೀಠವು, ಸರ್ಕಾರಕ್ಕೆ ಒಂದುವಾರ ಕಾಲಾವಕಾಶ ನೀಡುವುದಾಗಿ ಹೇಳಿತು. ಅರ್ಜಿದಾರರಾದ ಅಹಮದಾಬಾದ್ ಐಐಎಂನ ಮಾಜಿ ನಿರ್ದೇಶಕ ಜಗದೀಪ್ ಎಸ್.ಚೋಕರ್, ವಕೀಲ ಗೌರವ್ ಜೈನ್ ಅವರ ಪರ ವಕೀಲ ಪ್ರಶಾಂತ್ ಭೂಷಣ್ ವಾದ ಮಂಡಿಸಿದರು.

ಆಧಾರ:ಪ್ರಜಾವಾಣಿ , ದಿನಾಂಕ:28.04.2020